**All India Radio: Bangalore**
**National Bulletin In Kannada**
**20.08.2025 1.10pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.08.2025 1.10pm**

**<><><><>**

ಮುಖ್ಯಾಂಶಗಳು

೧. ಸಂಸತ್ತಿನ ಉಭಯ ಸದನಗಳಲ್ಲಿ ಮುಂದುವರೆದ ಗದ್ದಲ; ಲೋಕಸಭೆಯಲ್ಲಿ ಆನ್‌ಲೈನ್ ಗೇಮಿಂಗ್ ತಿದ್ದುಪಡಿ ಮಸೂದೆ ಮಂಡನೆ

೨. ಉಪರಾಷ್ಟ್ರಪತಿ ಚುನಾವಣೆಗೆ ಎನ್ ಡಿ ಎ ಅಭ್ಯರ್ಥಿಯಾಗಿ ಸಿ.ಪಿ.ರಾಧಾಕೃಷ್ಣನ್ ನಾಮಪತ್ರ

೩. ಚುನಾವಣಾ ವ್ಯವಸ್ಥೆ ಸುಧಾರಣೆಗೆ ಬೂತ್ ಮಟ್ಟದ ಏಜೆಂಟ್‌ಗಳ ತರಬೇತಿ ಸೇರಿ ೨೮ ಹೊಸ ಯೋಜನೆಗಳ ಜಾರಿಗೆ ಚುನಾವಣಾ ಆಯೋಗ ನಿರ್ಧಾರ

೪. ೧೬ನೇ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್; ಚಿನ್ನಗೆದ್ದ ಭಾರತದ ರಶ್ಮಿಕಾ ಸಹಗಲ್

><><><><><><

ಸಂಸತ್ತಿನ ಉಭಯ ಸದನಗಳಲ್ಲಿ ಬಿಹಾರದ ಮತದಾರರ ವಿಶೇಷ ಪಟ್ಟಿ ಪರಿಷ್ಕರಣೆ ಸೇರಿದಂತೆ ಹಲವು ವಿಷಯಗಳ ಕುರಿತು ಗದ್ದಲ, ಕೋಲಾಹಲ ವಾತಾವರಣ ನಿರ್ಮಾಣವಾದ ಹಿನ್ನೆಲೆಯಲ್ಲಿ ಕಲಾಪವನ್ನು ಪದೇ ಪದೇ ಮುಂದೂಡುವ ಪರಿಸ್ಥಿತಿ ನಿರ್ಮಾಣವಾಯಿತು. ಲೋಕಸಭೆ ಸಮಾವೇಶಗೊಂಡಾಗ ವಿಪಕ್ಷ ಸದಸ್ಯರು ಬಿಹಾರ ಮತದಾರರ ಪಟ್ಟಿ ಪರಿಷ್ಕರಣೆ ವಿಷಯ ಕೈಗೆತ್ತಿಕೊಳ್ಳಬೇಕೆಂದು ಆಗ್ರಹಿಸಿ ಧರಣಿ ನಡೆಸಿದರು. ಕಲಾಪಕ್ಕೆ ಅಡ್ಡಿ ಪಡಿಸಿದ ವಿರೋಧ ಪಕ್ಷದ ಸದಸ್ಯರ ವರ್ತನೆಗೆ ಸಭಾಧ್ಯಕ್ಷ ಓಂ ಬಿರ್ಲಾ ಅಸಮಾಧಾನ ವ್ಯಕ್ತಪಡಿಸಿ ಕಲಾಪವನ್ನು ಅಪರಾಹ್ನ ೧೨ ಗಂಟೆಗೆ ಮುಂದೂಡಲಾಯಿತು. ನಂತರ ಸದನ ಸೇರಿದಾಗ ಸಭಾಪತಿ ಪೀಠದಲ್ಲಿದ್ದ ಪಿಸಿ ಮೋಹನ್ ಗದ್ದಲದ ನಡುವೆ ಅಧಿಕೃತ ಕಲಾಪಗಳನ್ನು ನಡೆಸಿದರು. ಈ ಸಂದರ್ಭದಲ್ಲಿ ಹಲವು

ಸಂಸದೀಯ ಸಮಿತಿ ವರದಿಗಳು ಮಂಡನೆಯಾದವು. ಇದೇ ಸಂದರ್ಭದಲ್ಲಿ ಕೇಂದ್ರ ವಿದ್ಯುನ್ಮಾನ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಆನ್‌ಲೈನ್ ಗೇಮಿಂಗ್‌ಗೆ ಉತ್ತೇಜನ ಮತ್ತು ನಿಯಂತ್ರಣಗೊಳಿಸುವ ತಿದ್ದುಪಡಿ ಮಸೂದೆಯನ್ನು ಮಂಡಿಸಿದರು. ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾತನಾಡಿ, ಕಲಾಪಕ್ಕೆ ಅಡ್ಡಿಪಡಿಸುವುದು ಸರಿಯಲ್ಲ. ಗದ್ದಲದಿಂದ ಫಲಪ್ರದ ಚರ್ಚೆ ಸಾಧ್ಯವಿಲ್ಲ ಎಂದು ಹೇಳಿದರು. ಗದ್ದಲದ ನಡುವೆ ಕಲಾಪ ಮುಂದುವರೆಯುತ್ತಿದೆ. ರಾಜ್ಯಸಭೆಯಲ್ಲೂ ಇದೇ ಪರಿಸ್ಥಿತಿ ಮುಂದುವರೆಯಿತು. ಉಪಸಭಾಪತಿ ಹರಿವಂಶ್ ಮಾತನಾಡಿ, ವಿವಿಧ ರಾಜಕೀಯ ಪಕ್ಷಗಳು ೧೮ ನಿಲುವಳಿ ಸೂಚನೆಗಳನ್ನು ಸಲ್ಲಿಸಿದ್ದು, ಇವುಗಳನ್ನು ತಿರಸ್ಕರಿಸಲಾಗಿದೆ ಎಂದರು. ಆಗ ಪ್ರತಿಪಕ್ಷ ಸದಸ್ಯರು ಘೋಷಣೆ ಕೂಗಿ ಗದ್ದಲ ಉಂಟು ಮಾಡಿದಾಗ ಕಲಾಪವನ್ನು ೧೨ ಗಂಟೆಗೆ ಮುಂದೂಡಿದರು. ನಂತರ ಸದನ ಸೇರಿದಾಗ ಗದ್ದಲ ಮುಂದುವರೆಯಿತು. ಕಲಾಪವನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಿದರು.

><><><><><><

ಉಪರಾಷ್ಟ್ರಪತಿ ಚುನಾವಣೆಗೆ ಎನ್.ಡಿ.ಎ ಅಭ್ಯರ್ಥಿಯಾಗಿ ಸಿ.ಪಿ.ರಾಧಾಕೃಷ್ಣನ್ ಇಂದು ನಾಮಪತ್ರ ಸಲ್ಲಿಸಿದರು. ಸಂಸತ್ ಭವನದಲ್ಲಿ ಉಮೇದುವಾರಿಕೆ ಸಲ್ಲಿಸುವಾಗ ಪ್ರಧಾನಿ ನರೇಂದ್ರ ಮೋದಿ, ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಜೆ.ಪಿ.ನಡ್ಡಾ, ಕಿರಣ್ ರಿಜಿಜು, ಎಲ್.ಜೆ.ಪಿ. ಮುಖಂಡ ಚಿರಾಗ್ ಪಾಸ್ವಾನ್, ಜೆಡಿಯು ಮುಖ್ಯಸ್ಥ ರಾಜೀವ್ ರಂಜನ್ ಸಿಂಗ್, ಎನ್‌ಸಿಪಿ ಮುಖಂಡ ಪ್ರಫುಲ್ ಪಟೇಲ್ ಹಾಗೂ ಎನ್.ಡಿ.ಎ. ಒಕ್ಕೂಟದ ಇತರೇ ಪ್ರಮುಖ ನಾಯಕರು ಉಪಸ್ಥಿತರಿದ್ದರು. ನಂತರ ಸಿ.ಪಿ.ರಾಧಾಕೃಷ್ಣನ್ ಅವರು, ಸಂಸತ್ ಭವನದ ಪ್ರೇರಣಾ ಸ್ಥಳದಲ್ಲಿ ಪುಷ್ಪ ನಮನ ಸಲ್ಲಿಸಿದರು. ಪ್ರೇರಣಾ ಸ್ಥಳದಲ್ಲಿ ಸ್ವಾತಂತ್ರ್ಯ ಹೋರಾಟಗಾರರು ಮತ್ತು ಮತ್ತಿತರ ಗಣ್ಯರ ಪುತ್ಥಳಿಗಳಿವೆ. ಮಹಾತ್ಮ ಗಾಂಧೀಜಿ ಮತ್ತಿತರ ಗಣ್ಯರಿಗೆ ಸಿ.ಪಿ.ರಾಧಾಕೃಷ್ಣನ್ ಅವರು ಗೌರವ ಸಲ್ಲಿಸಿದರು. ಉಪರಾಷ್ಟ್ರಪತಿ ಚುನಾವಣೆ ಮುಂದಿನ ತಿಂಗಳ ೯ರಂದು ನಡೆಯಲಿದೆ.

><><><><><><

ಕಳೆದ ಆರು ತಿಂಗಳುಗಳಲ್ಲಿ, ಚುನಾವಣಾ ಪ್ರಕ್ರಿಯೆಯನ್ನು ಸುಗಮಗೊಳಿಸುವ ಮತ್ತು ಸುಧಾರಿಸುವ ಗುರಿಯನ್ನು ಹೊಂದಿರುವ ಹಲವಾರು ಯೋಜನೆಗಳನ್ನು ರೂಪಿಸಲಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ಹೇಳಿದೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಆಯೋಗವು, ಎಲ್ಲಾ ಪಾಲುದಾರರೊಂದಿಗೆ ತೊಡಗಿಸಿಕೊಳ್ಳುವುದು, ಚುನಾವಣಾ ವ್ಯವಸ್ಥೆಗಳನ್ನು ಬಲಪಡಿಸುವುದು, ತಂತ್ರಜ್ಞಾನದ ಬಳಕೆ ಹೆಚ್ಚಿಸುವುದು, ಮತದಾನದ ಸುಲಭತೆ, ಮತದಾರರ ಪಟ್ಟಿಯ ಶುದ್ಧತೆ ಮತ್ತು ಸಾಮರ್ಥ್ಯ ವೃದ್ಧಿಯ ಬಗ್ಗೆ ಗಮನ ಹರಿಸಲಾಗುತ್ತಿದೆ ಎಂದಿದೆ. ನಿಷ್ಕ್ರಿಯ ರಾಜಕೀಯ ಪಕ್ಷಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗುವುದು, ರಾಜಕೀಯ ಪಕ್ಷಗಳಿಂದ ನೇಮಕಗೊಂಡ ಬೂತ್ ಮಟ್ಟದ ಏಜೆಂಟ್‌ಗಳ ತರಬೇತಿ ಸೇರಿದಂತೆ ೨೮ ಹೊಸ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಆಯೋಗ ತಿಳಿಸಿದೆ.

><><><><><><><

ದೇಶದ ಹಲವೆಡೆ ವ್ಯಾಪಕ ಮಳೆ ಹಾಗೂ ಪ್ರತಿಕೂಲ ಹವಾಮಾನ ಉಂಟಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಷಾ ದೆಹಲಿಯಲ್ಲಿ ನಿನ್ನೆ ವಿಪತ್ತು ನಿರ್ವಹಣೆ ಮತ್ತು ಸಾಮರ್ಥ್ಯ ವೃದ್ಧಿ ಕುರಿತು ಗೃಹ ಸಚಿವಾಲಯದ ಸಂಸದೀಯ ಸಮಾಲೋಚನಾ ಸಮಿತಿ ಸಭೆ ನಡೆಸಿದರು. ಗೃಹ ವ್ಯವಹಾರಗಳ ರಾಜ್ಯ ಸಚಿವ ನಿತಾನಂದರೈ ಮತ್ತು ಬಂಡಿ ಸಂಜಯ್ ಕುಮಾರ್, ಸಮಿತಿಯ ಸದಸ್ಯರು ಮತ್ತು ಕೇಂದ್ರ ಗೃಹ ಕಾರ್ಯದರ್ಶಿಗಳು, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಮುಖ್ಯಸ್ಥರು ಮತ್ತಿತರರ ಅಧಿಕಾರಿಗಳು ಉಪಸ್ಥಿತರಿದ್ದರು. ಸಭೆ ಉದ್ದೇಶಿಸಿ ಮಾತನಾಡಿದ ಅಮಿತ್ ಷಾ , ಪ್ರಧಾನಿ ನರೇಂದ್ರಮೋದಿ ನೇತೃತ್ವದ ಸರ್ಕಾರ, ವಿಪತ್ತು ಪ್ರತಿಕ್ರಿಯೆ ನೀತಿಯು ಸಾಮರ್ಥ್ಯ ವೃದ್ಧಿ, ವೇಗ, ದಕ್ಷತೆ ಮತ್ತು ನಿಖರತೆ ಎಂಬ ನಾಲ್ಕು ಸ್ತಂಭಗಳನ್ನು ರೂಪಿಸುವ ಮೂಲಕ ವಿಧಾನ ಮತ್ತು ಕಾರ್ಯತಂತ್ರವನ್ನು ಬದಲಾಯಿಸಿದೆ. ಕಳೆದ ಹತ್ತು ವರ್ಷಗಳಲ್ಲಿ ವಿಪತ್ತು ನಿರ್ವಹಣಾ ಕ್ಷೇತ್ರಗಳಲ್ಲಿ ಅನೇಕ ಪ್ರಮುಖ ನೀತಿ ಸಂಬಂಧಿತ ಮತ್ತು ಸಾಂಸ್ಥಿಕ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದರು.

><><><><><><><

ದೆಹಲಿ ಮುಖ್ಯಮಂತ್ರಿ ನಿವಾಸದಲ್ಲಿ ಇಂದು ಬೆಳಿಗ್ಗೆ ನಡೆದ ವಾರದ ಜನತಾದರ್ಶನ ಸಂದರ್ಭದಲ್ಲಿ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರ ಮೇಲೆ ವ್ಯಕ್ತಿಯೊಬ್ಬ ದಾಳಿ ನಡೆಸಿದ್ದಾನೆ. ಈ ಘಟನೆಯನ್ನು ಬಿಜೆಪಿ ಖಂಡಿಸಿದೆ. ದೆಹಲಿ ಬಿಜೆಪಿ ಅಧ್ಯಕ್ಷ ವೀರೇಂದ್ರ ಸಚ್‌ದೇವ ಮಾತನಾಡಿ, ಆರೋಪಿಯನ್ನು ಸ್ಥಳದಲ್ಲಿದ್ದ ಜನ ಬಂಧಿಸಿದ್ದಾರೆ. ಹೆಚ್ಚಿನ ವಿವರಗಳಿಗಾಗಿ ಪೊಲೀಸರು ತನಿಖೆ ಆರಂಭಿಸಿದ್ದಾರೆ. ವೈದ್ಯರು ಮುಖ್ಯಮಂತ್ರಿ ಅವರನ್ನು ಪರೀಕ್ಷಿಸಿದ್ದು, ಅವರ ಆರೋಗ್ಯ ಸ್ಥಿರವಾಗಿದೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

><><><><><><

ಪ್ರಧಾನಿ ನರೇಂದ್ರ ಮೋದಿ ಈ ತಿಂಗಳ ೨೨ ರಂದು ಬಿಹಾರದ ಗಯಾದಲ್ಲಿಗಿ ಔಂಟಾ - ಸಿಮಾರಿಯಾ ಯೋಜನೆಯನ್ನು ಉದ್ಘಾಟಿಸಲಿದ್ದಾರೆ. ಈ ಯೋಜನೆಯಲ್ಲಿ ಗಂಗಾ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ ಸುಮಾರು ಎರಡು ಕಿಲೋಮೀಟರ್ ಉದ್ದದ ಸೇತುವೆ ಸೇರಿದೆ, ಇದು ಪಾಟ್ನಾ ಜಿಲ್ಲೆಯ ಮೊಕಾಮಾ ಮತ್ತು ಬೇಗುಸರಾಯ್ ನಡುವೆ ನೇರ ಸಂಪರ್ಕವನ್ನು ಒದಗಿಸುತ್ತದೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಸದಸ್ಯ ಅನಿಲ್ ಚೌಧರಿ ಮಾತನಾಡಿ, ಈ ಸೇತುವೆಯನ್ನು ಹಳೆಯ ೨-ಮಾರ್ಗದ ರೈಲು ಜೊತೆಗೆ ರಸ್ತೆ ಸೇತುವೆ 'ರಾಜೇಂದ್ರ ಸೇತು' ಗೆ ಸಮಾನಾಂತರವಾಗಿ ನಿರ್ಮಿಸಲಾಗಿದೆ ಎಂದು ಮಾಹಿತಿ ನೀಡಿದರು. ಹೊಸ ಸೇತುವೆಯು ಉತ್ತರ ಬಿಹಾರ ಮತ್ತು ದಕ್ಷಿಣ ಬಿಹಾರದ ಪ್ರದೇಶಗಳ ನಡುವೆ ಪ್ರಯಾಣಿಸುವ ಭಾರೀ ವಾಹನಗಳಿಗೆ ಹೆಚ್ಚುವರಿ ಪ್ರಯಾಣದ ದೂರವನ್ನು ೧೦೦ ಕಿಲೋಮೀಟರ್‌ಗಳಷ್ಟು ಕಡಿಮೆ ಮಾಡುತ್ತದೆ. ಈ ಯೋಜನೆಯು ಭಾರೀ ವಾಹನಗಳಿಗೆ ಪ್ರಯಾಣವನ್ನು ಸುಲಭಗೊಳಿಸುತ್ತದೆ ಮತ್ತು ವೇಗಗೊಳಿಸುತ್ತದೆ, ಇದರಿಂದಾಗಿ ಇಂಧನ ಮತ್ತು ವಾಹನ ಕಾರ್ಯಾಚರಣೆ ವೆಚ್ಚವನ್ನು ಉಳಿಸುತ್ತದೆ ಎಂದು ಚೌಧರಿ ಹೇಳಿದರು.

><><><><><><

ಇಂದು ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂಧಿ ಅವರ ಜನ್ಮದಿನ. ರಾಜೀವ್ ಗಾಂಧಿ ಅವರ ಜಯಂತಿಯಂದು ಪ್ರಧಾನಿ ನರೇಂದ್ರ ಮೋದಿ ಅವರು ಅವರಿಗೆ ಸಾಮಾಜಿಕ ಮಾಧ್ಯಮದ ಮೂಲಕ ಗೌರವ ಸಲ್ಲಿಸಿದ್ದಾರೆ.

><><><><><><

ಕಝಾಕಿಸ್ತಾನದ ಶಿಮ್ಕೆಂಟ್‌ನಲ್ಲಿ ನಡೆದ ೧೬ನೇ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ರಶ್ಮಿಕಾ ಸಹಗಲ್ ಚಿನ್ನ ಗೆದ್ದಿದ್ದಾರೆ, ಇದು ಭಾರತದ ಮೂರನೇ ವೈಯಕ್ತಿಕ ಸ್ವರ್ಣ ಪದಕವಾಗಿದೆ. ರಶ್ಮಿಕಾ ಜೂನಿಯರ್ ಮಹಿಳಾ ಏರ್ ಪಿಸ್ತೂಲ್‌ನಲ್ಲಿ ೨೪೧.೯ ಅಂಕಗಳೊಂದಿಗೆ ತಮ್ಮ ಅದ್ಭುತ ಪ್ರದರ್ಶನ ನೀಡಿದರು. ಬೆಳ್ಳಿ ವಿಜೇತ ಕೊರಿಯಾದ ಹಾನ್ ಸೆಯುಂಗ್‌ಹ್ಯುನ್‌ಗಿಂತ ರಶ್ಮಿಕಾ ೪.೩ ಅಂಕಗಳೊಂದಿಗೆ ಮುನ್ನಡೆ ಸಾಧಿಸಿದ್ದರು. ಇಯರಿಲ್‌ನಲ್ಲಿ, ಡಬಲ್ ಒಲಿಂಪಿಕ್ ಕಂಚಿನ ಪದಕ ವಿಜೇತೆ ಮನು ಭಾಕರ್, ಮಹಿಳೆಯರ ೧೦ ಮೀಟರ್ ಏರ್ ಪಿಸ್ತೂಲ್ ಫೈನಲ್‌ನಲ್ಲಿ ೨೧೯.೭ ಅಂಕಗಳೊಂದಿಗೆ ಮೂರನೇ ಸ್ಥಾನ ಪಡೆಯುವ ಮೂಲಕ ಮತ್ತೊಂದು ವೈಯಕ್ತಿಕ ಅಂತಾರಾಷ್ಟ್ರೀಯ ಪದಕವನ್ನು ಭಾರತಕ್ಕೆ ತಂದುಕೊಟ್ಟರು. ಭಾರತ ಇಲ್ಲಿಯವರೆಗೆ ನಡೆದ ಎಲ್ಲಾ ಸ್ಪರ್ಧೆಗಳಿಂದ ಐದು ಚಿನ್ನ, ಎರಡು ಬೆಳ್ಳಿ ಮತ್ತು ನಾಲ್ಕು ಕಂಚಿನ ಪದಕಗಳನ್ನು ಗೆದ್ದಿದೆ.

><><><><><><

ಒಂದು ದಿನದ ಭಾರೀ ಮಳೆಯ ನಂತರ, ಇಂದು ಬೆಳಿಗ್ಗೆ ಮುಂಬೈನಲ್ಲಿ ಹಗುರದಿಂದ ಕೂಡಿದ ಸಾಧಾರಣ ಮಳೆಯಾಗಿದೆ. ಇಂದು ಮುಂಬೈ, ಥಾಣೆ ಮತ್ತು ಪಾಲ್ಘರ್‌ಗಳಿಗೆ ಭಾರತೀಯ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಎಚ್ಚರಿಕೆ ನೀಡಿದೆ.

><><><><><><